ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಸೋಮವಾರ, ದಿನಾಂಕ : 22ನೇ ಜುಲೈ, 2019

ರಾಜ್ಯದ ಪಶು ಆಸ್ಪತ್ರೆಗಳಲ್ಲಿ ವೈದ್ಯರ ನೇಮಕಾತಿ ಕುರಿತು

ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ):-

462 (461) ಮಾನ್ಯ ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಜಿಲ್ಲಾ, ತಾಲ್ಲೂಕು, ಹೋಬಳಿ ಮಟ್ಟದ ಪಶು ಆಸ್ಪತ್ರೆಗಳಲ್ಲಿ ಪಶು ಚಿಕಿತ್ಸೆ ಹಾಗೂ ಪ್ರಾಥಮಿಕ ಪಶು ಚಿಕಿತ್ಸಾಲಯಗಳಲ್ಲಿ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮೇಲ್ಕಂಡ ಪಶು ಆಸ್ಪತ್ರೆಗಳಿಗೆ ಮಂಜೂರಾದ ಹುದ್ದೆಗಳು ಎಷ್ಟು; ಎಷ್ಟು ಜನ ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಕೊರತೆ ಇರುವ ಪಶು ವೈದ್ಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಪಶು ವೈದ್ಯರ ಕೊರತೆ ಇದ್ದಲ್ಲಿ ಎಷ್ಟು ಜನ ವೈದ್ಯರನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಚಿಂತನೆ ನಡೆಸಿದೆ ಮತ್ತು ನೇಮಕಾತಿ ಪ್ರಕ್ರಿಯೆ ಯಾವ ಹಂತದಲ್ಲಿದೆ;

(ಈ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ವೈದ್ಯರ ಕೊರತೆ ನೀಗಿಸಲು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುವ ಪದ್ಧತಿ ಜಾರಿಯಲ್ಲಿದ್ದು, ಅದರಂತೆ ಪಶು ಸಂಗೋಪನೆ ಇಲಾಖೆಯಲ್ಲಿ ಮಾಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ?